All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

02.12.2025 6.40 p.m.

***************

ಮುಖ್ಯಾಂಶಗಳು

- ನವದೆಹಲಿಯಲ್ಲಿ ಇದೇ ಲರಂದು ಸರ್ವಪಕ್ಷ ಸಂಸದರ ಸಭೆ ಕರೆಯಲು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ಧಾರ
- ವಿದ್ಯಾರ್ಥಿಗಳಿಗೆ ೧೫ ದಿನಗಳೊಳಗೆ ವರ್ಗಾವಣೆ ಪ್ರಮಾಣ ಪತ್ರ ನೀಡುವಂತೆ ಶಾಲೆಗಳಿಗೆ ಶಿಕ್ಷಣ ಇಲಾಖೆ ಸೂಚನೆ
- ದತ್ತ ಜಯಂತಿ ಹಿನ್ನೆಲೆ ; ಚಿಕ್ಕಮಗಳೂರು ಜಿಲ್ಲೆಯಲ್ಲಿ ಬಿಗಿ ಪೊಲೀಸ್ ಭದ್ರತೆ
- ಅಂಗನವಾಡಿ ಕಾರ್ಯಕರ್ತರ, ರೈತರ, ಉದ್ಯಮಿಗಳ ವಿಶ್ವಾಸ ಕಳೆದುಕೊಂಡ ಸರ್ಕಾರ; ಬಿಜೆಪಿ ಆರೋಪ
- ಬೆಂಗಳೂರಿನ ಈಜೀಪುರ ಮೇಲ್ಸೇತುವೆ ನಿರ್ಮಾಣ ಮಾಡಲು ತ್ವರಿತ ಭೂಸ್ವಾಧೀನಕ್ಕೆ ಜಿಬಿಎ ಆಯುಕ್ತ ಮಹೇಶ್ವರರಾವ್ ಸೂಚನೆ

***************

ಅಧಿಕಾರ ಹಂಚಿಕೆ ಕುರಿತಂತೆ ರಾಜ್ಯ ಕಾಂಗ್ರೆಸ್‌ನಲ್ಲಿ ಉಂಟಾಗಿದ್ದ ಬಿಕ್ಕಟ್ಟಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತೆರೆ ಎಳೆದಿದ್ದಾರೆ.

ಇಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿವಾಸಕ್ಕೆ ತೆರಳಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಉಪಹಾರ ಕೂಟದಲ್ಲಿ ಭಾಗವಹಿಸಿದ್ದಾರೆ. ಬಳಿಕ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜಕೀಯ ಯಾರಿಗೂ ಶಾಶ್ವತವಲ್ಲ ಎಂದು ತಿಳಿಸಿದ್ದಾರೆ.

ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮುಖ್ಯಮಂತ್ರಿ ಹಾಗೂ ತಮ್ಮ ಮಧ್ಯೆ ಯಾವುದೇ ಗೊಂದಲವಿಲ್ಲ ಎಂದು ಹೇಳಿದ್ದಾರೆ. ಇದೇ ಲರಂದು ಉಭಯ ನಾಯಕರು ನವದೆಹಲಿಗೆ ತೆರಳಿ ಸರ್ವಪಕ್ಷ ಸಂಸದರ ಸಭೆ ನಡೆಸುವುದಾಗಿ ತಿಳಿಸಿದ್ದಾರೆ.

ಯಾವುದೇ ಶಾಸಕರಲ್ಲಿ ನಾಯಕತ್ವ ಕುರಿತಂತೆ ಭಿನ್ನಾಭಿಪ್ರಾಯವಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವೆ ಯಾವುದೇ ಭಿನ್ನಾಭಿಪ್ರಾಯವಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವರಿಗೆ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಇನ್ನು ಕೆಲವರಿಗೆ ತಾವು ಮುಖ್ಯಮಂತ್ರಿಯಾಗಬೇಕೆಂಬ ಆಕ್ಷಾಂಕ್ಷೆಯಿದೆ. ಹೈಕಮಾಂಡ್ ತೀರ್ಮಾನವೇ ಅಂತಿಮ ಎಂದು ತಿಳಿಸಿದ್ದಾರೆ.

***************

ರಾಜ್ಯ ಮಕ್ಕಳ ಆಯೋಗದ ನಿರ್ದೇಶನದಂತೆ ರಾಜ್ಯದ ಖಾಸಗಿ ಸೇರಿದಂತೆ ಎಲ್ಲಾ ಶಾಲೆಗಳು ಅರ್ಜಿ ಸ್ವೀಕರಿಸಿದ ೧೫ ದಿನಗಳಲ್ಲಿ ವರ್ಗಾವಣೆ ಪ್ರಮಾಣಪತ್ರ ನೀಡಬೇಕು ಎಂದು ಶಿಕ್ಷಣ ಇಲಾಖೆ ಸೂಚನೆ ನೀಡಿದೆ.

ಶುಲ್ಕ ಬಾಕಿ ಇದ್ದರೂ ವರ್ಗಾವಣೆ ಪ್ರಮಾಣ ಪತ್ರ ವಿಳಂಬ ಮಾಡುವಂತಿಲ್ಲ. ಒಂದು ವೇಳೆ ಟಿಸಿ ವಿಳಂಬವಾದರೆ ಪೋಷಕರು ಶಿಕ್ಷಣಾಧಿಕಾರಿಗೆ ದೂರು ನೀಡಬಹುದು ಎಂದು ತಿಳಿಸಿದೆ.

ಶಾಲೆಗಳು ವರ್ಗಾವಣೆ ಪ್ರಮಾಣಪತ್ರ ವಿಳಂಬ ಮಾಡುತ್ತಿರುವ ಬಗ್ಗೆ ಪೋಷಕರಿಂದ ದೂರು ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಇಲಾಖೆ ಈ ಸುತ್ತೋಲೆ ಹೊರಡಿಸಿದೆ.

***************

ದತ್ತ ಜಯಂತಿ ಹಿನ್ನೆಲೆಯಲ್ಲಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಬಿಗಿ ಪೊಲೀಸ್ ಭದ್ರತೆ ಕೈಗೊಳ್ಳಲಾಗಿದೆ. ನಾಳೆ ಮಧ್ಯಾಹ್ನ ಚಿಕ್ಕಮಗಳೂರು ನಗರದಲ್ಲಿ ಶೋಭಾ ಯಾತ್ರೆ ನಡೆಯಲಿದೆ. ನಾಡಿದ್ದು ದತ್ತಪೀಠದಲ್ಲಿ ದತ್ತ ಜಯಂತಿ ಉತ್ಸವ ನಡೆಯಲ್ಲಿದ್ದು ಯಾವುದೇ ಆಹಿತಕರ ಘಟನೆ ನಡೆಯದಂತೆ ಪೊಲೀಸ್ ಭದ್ರತೆ ಏರ್ಪಡಿಸಲಾಗಿದೆ.

ಐ.ಜಿ.ಪಿ, ಪೊಲೀಸ್ ವರಿಷ್ಠಾಧಿಕಾರಿಗಳು, ಹಿರಿಯ ಪೊಲೀಸ್ ಅಧಿಕಾರಿಗಳ ಜೊತೆಗೆ ಕ್ಷಿಪ್ರ ಕಾರ್ಯ ಪಡೆ, ರಾಜ್ಯ ಮೀಸಲು ಪೊಲೀಸ್ ಪಡೆ ಸೇರಿದಂತೆ ಸುಮಾರು ೫ ಸಾವಿರ ಪೊಲೀಸರನ್ನು ಜಿಲ್ಲೆಯಾದ್ಯಂತ ನಿಯೋಜಿಸಲಾಗಿದೆ. ಜಿಲ್ಲೆಯ ೨೭ ಕಡೆಗಳಲ್ಲಿ ಚೆಕ್‌ಪೋಸ್ಟ್ ತೆರೆದು ವಾಹನಗಳ ತಪಾಸಣೆ ಮಾಡಲಾಗುತ್ತಿದೆ. ದೇವಾಲಯ, ಪ್ರಾರ್ಥನ ಮಂದಿರಗಳಿಗೆ ಪೊಲೀಸ್ ಭದ್ರತೆ ಒದಗಿಸಲಾಗಿದ್ದು ನಾಳೆ ಮತ್ತು ನಾಡಿದ್ದು ಜಿಲ್ಲೆಯ ಕೆಲ ತಾಲೂಕುಗಳಲ್ಲಿ ಮದ್ಯ ಮಾರಾಟ ನಿಷೇಧಿಸಲಾಗಿದೆ.

ಈಗಾಗಲೇ ಪೊಲೀಸ್ ಅಧಿಕಾರಿಗಳು ಸಿಬ್ಬಂದಿ ಜೊತೆ ಚಿಕ್ಕಮಗಳೂರು ನಗರದ ಹಲವೆಡೆ ಪಥಸಂಚಲನ ನಡೆಸಿದ್ದಾರೆ.

***************

ಮಂಡ್ಯ ಜಿಲ್ಲೆಯ ಮದ್ದೂರು ಪಟ್ಟಣದ ಟಿ.ಬಿ. ವೃತ್ತದಿಂದ ಕೊಲ್ಲಿ ವೃತ್ತದವರೆಗಿನ ರಸ್ತೆ ಅಗಲೀಕರಣ ಕಾಮಗಾರಿ ವಿಷಯ ಕುರಿತು  ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ಇಂದು ಸಭೆ ನಡೆಯಿತು.

೨೦೨೫ -೨೬ ನೇ ಸಾಲಿನ ವಾರ್ಷಿಕ ಬಜೆಟ್ ನಲ್ಲಿ  ಮದ್ದೂರು ನಗರದಲ್ಲಿ ರಸ್ತೆ ಅಗಲೀಕರಣಕ್ಕಾಗಿ ವಿಸ್ತೃತ ಯೋಜನಾ ವರದಿಗಳನ್ನು ತಯಾರಿಸಲು ಘೋಷಿಸಲಾಗಿತ್ತು.

ಅದರಂತೆ ಲೋಕೋಪಯೋಗಿ ಇಲಾಖೆಯಿಂದ ವಿಸ್ತೃತ ಯೋಜನಾ ವರದಿಯನ್ನೂ ತಯಾರಿಸಲಾಗಿದೆ. ರಸ್ತೆ ಅಗಲೀಕರಣ ಕಾಮಗಾರಿ ಯೋಜನಾ ವರದಿ ಪರಿಶೀಲಿಸಿದ ಮುಖ್ಯಮಂತ್ರಿಗಳು ಈ ರಸ್ತೆಯನ್ನು ೮೦ ಅಡಿ ವಿಸ್ತರಿಸಲು  ಸಚಿವ ಸಂಪುಟ ಸಭೆಗೆ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

***************

ರಾಜ್ಯ ಸರ್ಕಾರ ರೈತರ ಸಮಸ್ಯೆ ಬಗೆಹರಿಸಿಲ್ಲ. ರಸ್ತೆ ಗುಂಡಿಗಳನ್ನು ದುರಸ್ತಿ ಮಾಡಿಲ್ಲ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಮ್ಮ ನಡುವಿನ ಸಮಸ್ಯೆ ಬಗೆಹರಿಸಲು ಉಪಹಾರ ಸಭೆ ಮಾಡಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಟೀಕಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರ ಅಂಗನವಾಡಿ ಕಾರ್ಯಕರ್ತರು, ರೈತರು, ಉದ್ಯಮಿಗಳ ವಿಶ್ವಾಸವನ್ನು ಕಳೆದುಕೊಂಡಿದೆ ಎಂದು ದೂರಿದ್ದಾರೆ.

ಉತ್ತರಕರ್ನಾಟಕ ಅಭಿವೃದ್ಧಿ ಸೇರಿದಂತೆ ಯಾವುದೇ ಅಭಿವೃದ್ಧಿಗೆ ಸರ್ಕಾರದ ಬಳಿ ಹಣವಿಲ್ಲ ಎಂದು ಆರೋಪಿಸಿದ್ದಾರೆ.

***************

ಬೆಂಗಳೂರಿನ ಈಜೀಪುರ ಮೇಲ್ಸೇತುವೆಗೆ ಅಗತ್ಯವಿರುವ ಜಾಗವನ್ನು ತ್ವರಿತವಾಗಿ ಭೂಸ್ವಾಧಿನಪಡಿಸಿಕೊಳ್ಳಲು ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಈಜೀಪುರ ಮೇಲ್ಸೇತುವೆ ಕಾಮಗಾರಿ ನಡೆಯುವ ಸ್ಥಳದಲ್ಲಿ ಪ್ರಮುಖವಾಗಿ ಸೆಂಟ್ ಜಾನ್ಸ್ ಸಂಸ್ಥೆಗೆ ಸೇರಿದ ೨ ಕಡೆ ಜಾಗ, ಕೇಂದ್ರ ಸರ್ಕಾರದ ಅಡಿಯಲ್ಲಿ ಬರುವ ಕೇಂದ್ರೀಯ ಸದನ ಮತ್ತು ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಆಸ್ಟ್ರೋ ಫಿಜಿಕ್ಸ್ ಸ್ವತ್ತುಗಳನ್ನು ಭೂಸ್ವಾಧೀನಪಡಿಸಿಕೊಳ್ಳಬೇಕಾಗಿದೆ. ಅದಕ್ಕೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳ ಜೊತೆ

ಮಾತನಾಡಿ ಇರುವ ಸಮಸ್ಯೆಯನ್ನು ಕೂಡಲೇ ಇತ್ಯರ್ಥಪಡಿಸಿ ಜಾಗವನ್ನು ವಶಕ್ಕೆ ಪಡೆಯಲು ನಿರ್ದೇಶನ ನೀಡಿದ್ದಾರೆ.

***************

ಖಜಾನೆಯಲ್ಲಿ ಹಣವಿದ್ದರೂ ಕಾಮಗಾರಿ ಯಾಕೆ ಕೈಗೊಂಡಿಲ್ಲ ಎಂದು ಬಳ್ಳಾರಿಯಲ್ಲಿ ಮಹಾ ನಗರ ಪಾಲಿಕೆಯ ಅಧಿಕಾರಿಗಳನ್ನು ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿದ ಅವರು, ೧ ಕೋಟಿ ೨೪ ಲಕ್ಷ ರೂಪಾಯಿ ಕ್ರಿಯಾ ಯೋಜನೆ ತಯಾರಿಸಲು ಎರಡು ವರ್ಷ ಬೇಕಾ ಎಂದು ಪ್ರಶ್ನಿಸಿದ್ದಾರೆ.

ಪಾರ್ಕ್ ಮತ್ತು ಐದು ಕೆರೆಗಳ ಜಲ ಸಂಪನ್ಮೂಲ ಅಭಿವೃದ್ಧಿಗೆ ೨೫ ಕೋಟಿ ರೂಪಾಯಿ ಹಣವಿದ್ದರೂ ಯಾಕೆ ಬಳಕೆ ಮಾಡಿಲ್ಲ ಎಂದು ಕೇಳಿದ್ದಾರೆ.  ಇದೇ ವೇಳೆ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ್, ಪಾಲಿಕೆಯಲ್ಲಿ ೨೨೩ ಸಿಬ್ಬಂದಿ ಕೊರತೆ ಇದೆ ಎಂಬುದನ್ನು ಸಚಿವರ ಗಮನಕ್ಕೆ ತಂದರು.

***************

ಮಂಡ್ಯ ಕೃಷಿ ವಿಶ್ವವಿದ್ಯಾಲಯದ ಆವರಣದಲ್ಲಿ ಇದೇ ಮೊದಲ ಬಾರಿಗೆ ಇದೇ ೫ರಿಂದ ೭ರವರೆಗೆ ೩ ದಿನಗಳ ಕೃಷಿ ಮೇಳ ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ.

ಈ ಬಾರಿಯ ಕೃಷಿಮೇಳವನ್ನು ವೈಶಿಷ್ಟ್ಯಪೂರ್ಣ ಹಾಗೂ ವಿಭಿನ್ನವಾಗಿ ಆಯೋಜಿಸಲಾಗುತ್ತಿದ್ದು, ರೈತರಿಗೆ ವ್ಯವಸಾಯ, ಬೆಳೆಗಳ ಸಮಗ್ರ ಮಾಹಿತಿ ದೊರೆಯಲಿದೆ ಎಂದು ಮಂಡ್ಯ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ವಿಶೇಷಾಧಿಕಾರಿ ಡಾ.ಹರಿಣಿಕುಮಾರ್ ತಿಳಿಸಿದ್ದಾರೆ.

ಎರಡನೇ ದಿನದ ಮೇಳದಲ್ಲಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಮತ್ತು ಶೋಭಾ ಕರಂದ್ಲಾಜೆ ಭಾಗವಹಿಸಲಿದ್ದು, ಕಡೆ ದಿನ ಇದೇ ೭ರಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಸಮಾರೋಪ ಭಾಷಣ ಮಾಡಲಿದ್ದಾರೆ.

ಮೇಳದಲ್ಲಿ ೩೫೦ ಮಳಿಗೆಗಳನ್ನು ತೆರೆದು ರೈತರಿಗೆ ಒಂದೇ ಕಡೆ ತಾಂತ್ರಿಕ, ಹೊಸತಳಿ ಸೇರಿದಂತೆ ಎಲ್ಲ ರೀತಿಯ ಮಾಹಿತಿ ನೀಡಲಾಗುವುದು. ಉತ್ತಮ ಪೋಷಕಾಂಶಭರಿತ ಕಡಿಮೆ ನೀರಿನಲ್ಲಿ ಬೆಳೆಯುವ ರೋಗ ಮತ್ತು ಕೀಟಬಾಧೆ ನಿರೋಧಕತೆಯುಳ್ಳ ಹಾಗೂ ಅಧಿಕ ಇಳುವರಿಯ ಭತ್ತದ ತಳಿ ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಇದಕ್ಕಾಗಿ ಫಿಲಿಫೈನ್ಸ್ ಅಂತಾರಾಷ್ಟ್ರೀಯ

ಭತ್ತದ ಸಂಶೋಧನಾ ಕೇಂದ್ರ ಜೊತೆ ಒಪ್ಪಂದ ಮಾಡಿಕೊಂಡು ಅಲ್ಲಿ ಅಭಿವೃದ್ಧಿಪಡಿಸಿದ ತಳಿಗಳನ್ನು ತಂದು ಪ್ರಾತ್ಯಕ್ಷಿಕೆ ನೀಡುವ ಉದ್ದೇಶ ಹೊಂದಲಾಗಿದೆ ಎಂದು ಹೇಳಿದ್ದಾರೆ.

***************

ಡಾಕ್ಟರ್ ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದಲ್ಲಿ ವಿಶ್ವ ಏಡ್ಸ್ ದಿನಾಚರಣೆ ಅಂಗವಾಗಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಸರ್.ಎಂ.ವಿಶ್ವೇಶ್ವರಯ್ಯ ಮೆಟ್ರೋ ನಿಲ್ದಾಣದಿಂದ ಸೆಂಟ್ರಲ್ ಕಾಲೇಜಿನ ಗಡಿಯಾರ ಗೋಪುರದವರೆಗೆ ವಿದ್ಯಾರ್ಥಿಗಳು ಜಾಥಾ ನಡೆಸಿ ಘೋಷಣೆಗಳನ್ನು ಕೂಗುತ್ತಾ ಮೆರವಣಿಗೆ ಮೂಲಕ ಆಗಮಿಸಿದರು.

ಪೊಲೀಸ್ ಇಲಾಖೆಯ ವತಿಯಿಂದ ಮಹಿಳೆಯರ ರಕ್ಷಣೆ ಹಾಗೂ ಏಡ್ಸ್ ದುಷ್ಪರಿಣಾಮಗಳ ಕುರಿತು ಮಾಹಿತಿ ಒದಗಿಸಲಾಯಿತು. ಸಮಾಜ ಕಾರ್ಯ ವಿಭಾಗದ ವಿದ್ಯಾರ್ಥಿಗಳು ಬೀದಿ ನಾಟಕ ಪ್ರದರ್ಶಿಸಿದರು.

***************

ಕಾಂಗ್ರೆಸ್ ಸರ್ಕಾರ ರೈತರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿ ಹಾಸನ ಜಿಲ್ಲಾಧಿಕಾರಿ ಕಚೇರಿ ಎದುರು ಹಾಸನ ಜಿಲ್ಲಾ ಬಿಜೆಪಿ ರೈತ ಮೋರ್ಚಾ ವತಿಯಿಂದ ಪ್ರತಿಭಟನೆ ನಡೆಯಿತು.

ಶಾಸಕರಾದ ಎಚ್.ಕೆ ಸುರೇಶ್, ಸಿಮೆಂಟ್ ಮಂಜುನಾಥ್, ಬಿಜೆಪಿ ಜಿಲ್ಲಾಧ್ಯಕ್ಷ ಸಿದ್ದೇಶ್ ನಾಗೇಂದ್ರ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಪ್ರತಿಭಟನಾಕಾರರು ಎತ್ತಿನ ಗಾಡಿಗಳಲ್ಲಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರತಿಭಟನಾಕಾರರು, ಮಳೆಯಿಂದ ಬಾಳೆ ಹಾನಿಯಾಗಿರುವ ರೈತರಿಗೆ ಸೂಕ್ತ ಪರಿಹಾರ ನೀಡಿಲ್ಲ. ಮೆಕ್ಕೆಜೋಳಕ್ಕೆ ಸೂಕ್ತ ಬೆಂಬಲ ಬೆಲೆ ಘೋಷಣೆ ಮಾಡಿಲ್ಲ. ಕಾಫಿ, ಅಡಿಕೆ ತೆಂಗು ಸೇರಿದಂತೆ ಅನೇಕ ಬೆಳಗಳ ಉತ್ಪಾದನೆಯಲ್ಲಿ ೫೦ ರಷ್ಟು ಕುಂಠಿತವಾಗಿದ್ದು ರೈತ ಸಂಪರ್ಕ ಇರುವ ಯಾವುದೇ ಇಲಾಖೆಗಳು ರೈತರಿಗೆ ಸ್ಪಂದಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

*******ಮುಕ್ತಾಯ*******